# ಸಾವಿನ ಪ್ರಮಾಣ ತಗ್ಗಿಸಲು ಡಿಸಿಗಳಿಗೆ ಸಿಎಂ ತಾಕೀತು

ಸಂ.ಕ. ಸಮಾಚಾರ ಬೆಂಗಳೂರು 9/10/20

ಕೋವಿಡ್ ಸೋಂಕಿತರ ಪ್ರಥಮ ಮತ್ತು ದ್ವಿತೀಯ ಸಂಪರ್ಕಗಳನ್ನು ಪತ್ತೆ ಹಚ್ಚಿ, ಗುರಿಯಾಧಾರಿತ (ಟಾರ್ಗೆಟ್) ಪರೀಕ್ಷೆಗಳನ್ನು ಮಾಡಿ ಸೂಕ್ತ ಚಿಕಿತ್ಸೆ ನೀಡುವ ಮೂಲಕ ಸಾಂಕ್ರಾಮಿಕ ರೋಗ ತಡೆ ಹಾಗೂ ಸಾವಿನ ಪ್ರಮಾಣ ತಗ್ಗಿಸಲು ಹೆಚ್ಚಿನ ಮುತುವರ್ಜಿ ವಹಿಸಿ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.



ಗೃಹ ಕಚೇರಿ ಕೃಷ್ಣಾದಲ್ಲಿ ಗುರುವಾರ ಕೋವಿಡ್-19 ಪ್ರಕರಣಗಳು ಹೆಚ್ಚಾಗಿರುವ ರಾಜ್ಯದ 10 ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಪಂ ಸಿಇಒಗಳೊಂದಿಗೆ ವೀಡಿಯೋ ಸಂವಾದ ನಡೆಸಿದರು.

ಸಾಂಕ್ರಾಮಿಕ ರೋಗಕ್ಕೆ ಮಾಸ್ಕ್ ಧರಿಸುವುದು, ಸ್ಯಾನಿಟೈಸ್ ಮಾಡುವುದು ಮತ್ತು ಸಾಮಾಜಿಕ ಅಂತರವೇ ಮದ್ದು ಎಂಬುದನ್ನು ಜನರು ಅರಿಯಬೇಕು. ಮಾಸ್ಕ್ ಹಾಕದವರಿಗೆ ದಂಡ ವಿಧಿಸುವುದು ಅರಿವಿನ ಒಂದು ಭಾಗವೇ ಹೊರತು ಸರ್ಕಾರಕ್ಕೆ ಬೇರೆ ಉದ್ದೇಶ ಇಲ್ಲ ಎಂಬುದನ್ನು ಜನತೆಗೆ ಮನಗಾಣಿಸಬೇಕು ಎಂದು ಅಧಿಕಾರಿಗಳನ್ನು ಉದ್ದೇಶಿಸಿ ಹೇಳಿದರು.

ಕೋವಿಡ್ ಪ್ರಕರಣಗಳು ಹೆಚ್ಚಾಗಿರುವ ಬಳ್ಳಾರಿ, ದಕ್ಷಿಣ ಕನ್ನಡ, ಹಾಸನ, ಧಾರವಾಡ, ಬೆಳಗಾವಿ, ಮೈಸೂರು, ಶಿವಮೊಗ್ಗ, ತುಮಕೂರು, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಜಿಲ್ಲಾಧಿಕಾರಿಗಳು ತುಲನಾತ್ಮಕ ಅಧ್ಯಯನದೊಂದಿಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರಿಸಿದರು.

ಡೆತ್ ಆಡಿಟ್ ಬಗ್ಗೆ ಪರಿಶೀಲಿಸಿದ ಸಿಎಂ ಯಡಿಯೂರಪ್ಪ, ಧಾರವಾಡ ಜಿಲ್ಲೆಯಲ್ಲಿ ಮರಣ ಪ್ರಮಾಣ ಹೆಚ್ಚಿರುವ ಹಿನ್ನೆಲೆಯಲ್ಲಿ ಒಂದು ವಿಶೇಷ ತಂಡವನ್ನು ಕಳುಹಿಸಲು ಸೂಚಿಸಿದರು.

ಜಿಲ್ಲೆಗಳಲ್ಲಿ ಆರ್‌ಎಟಿ ಪರೀಕ್ಷೆಗಳನ್ನು ಹೆಚ್ಚು ಮಾಡುತ್ತಿದ್ದು, ಇದನ್ನು ಕಡಿಮೆ ಮಾಡಿ ಆರ್‌ಟಿಪಿಸಿಆರ್ ಪರೀಕ್ಷೆಗಳನ್ನು ಹೆಚ್ಚು ಮಾಡಬೇಕು ಎಂದು ಸೂಚಿಸಲಾಯಿತು. ಮನೆ ಆರೈಕೆಯಲ್ಲಿರುವವರಿಗೆ ಟೆಲಿ ಮಾನಿಟರಿಂಗ್ ಮುಖಾಂತರ ಆರೋಗ್ಯ ತಪಾಸಣೆಯನ್ನು ಕಾಲಕಾಲಕ್ಕೆ ಮಾಡಬೇಕು ಹಾಗೂ ಆರೋಗ್ಯ ಕಿಟ್‌ಗಳನ್ನು ನೀಡಬೇಕೆಂದು ಸೂಚಿಸಿದರು.

ಪಾಸಿಟಿವ್ ಪ್ರಕರಣಗಳನ್ನು ಕಡಿಮೆ ಮಾಡಲು ಸಮೀಕ್ಷೆ ಮಾಡಿ ತಪಾಸಣೆ ಕೈಗೊಳ್ಳಬೇಕು. ಆರ್‌ಟಿಪಿಸಿಆರ್ ಪರೀಕ್ಷೆಗಳನ್ನು ಹೆಚ್ಚು ಮಾಡಬೇಕು. ಅನಿವಾರ್ಯ ಇದ್ದಲ್ಲಿ ಮಾತ್ರ ಆರ್‌ಎಟಿ ಪರೀಕ್ಷೆ ಮಾಡಬೇಕೆಂದು ತಿಳಿಸಿದರು.

ಆಸ್ಪತ್ರೆಗಳಲ್ಲಿ ದಾಖಲಾದ ನಂತರ 72 ಗಂಟೆಗಳೊಳಗೆ ಆಗಿರುವ ಮರಣಗಳ ಕಾರಣವನ್ನು ತಿಳಿಯಲು ಮರಣಗಳ ಆಡಿಟ್ ಮಾಡಬೇಕು. ರಾಜ್ಯದಲ್ಲಿ ಶೇ.50ರಷ್ಟು ಮರಣಗಳು ಮೊದಲ 72 ಗಂಟೆಗಳಲ್ಲಿ ಆಗಿವೆ. ಹಾಗಾಗಿ ಪರೀಕ್ಷೆಗಳನ್ನು ಮಾಡಿ ಸೋಂಕು ಪತ್ತೆ ಹಚ್ಚುವುದು ಅತಿ ಮುಖ್ಯ. ಗ್ರಾಮೀಣ ಪ್ರದೇಶಗಳಲ್ಲಿ ಸೋಂಕು ಹರಡದಂತೆ ಎಚ್ಚರಿಕೆ ವಹಿಸಬೇಕು. ಕ್ಲಿನಿಕಲ್ ಶಿಷ್ಟಾಚಾರವನ್ನು ಕಟ್ಟುನಿಟ್ಟಾಗಿ ಅನುಸರಿಸಬೇಕು ಎಂದು ಸೂಚಿಸಿದರು.

ವೈದ್ಯಕೀಯ ಶಿಕ್ಷಣ ಸಚಿವ ಡಾ:ಕೆ.ಸುಧಾಕರ್, ಮೀನುಗಾರಿಕೆ ಮತ್ತು ಮುಜರಾಯಿ ಸಚಿವ ಕೋಟ ಶ್ರೀನಿವಾಸ ಪೂಜಾರಿ , ಕಂದಾಯ ಸಚಿವ ಆರ್. ಅಶೋಕ್, ಗೃಹ ಸಚಿವ ಬಸವರಾಜ ಬೊಮ್ಮಾಯಿ, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಡಾ.ಇ.ವಿ.ರಮಣರೆಡ್ಡಿ, ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.